Tumbe International e-Magazine
ISSN : 2581-7728
A Multilanguage Magazine
Issue-1
Volume-5
Jan-June: 2022

# ನಮ್ಮ ಪಾವಗಡ

**ಪಲ್ಲವಿ ಹೆಚ್ ಎಸ್**
U11GT21S0419
ಬಿಎಸ್ಸಿ ಮೊದಲನೇ ವರ್ಷ, ದ್ವಿತೀಯ ಸೆಮಿಸ್ಟರ್
ಸರ್ಕಾರಿ ಪ್ರಥಮ ದರ್ಜೆ ಕಾಲೇಜು ತುಮಕೂರು -572104
pallavipallavihs53@gmail.com Ph.no: 6363620433

ಪಾವಗಡ ತುಮಕೂರು ಜಿಲ್ಲೆಯ ಒಂದು ತಾಲೂಕು ಕೇಂದ್ರ. ಪಾವಗಡ ತಾಲ್ಲೂಕು ಕೇಂದ್ರವಾಗಿದೆ. ಆಂಧ್ರದ ಗಡಿಗೆ ಹೊಂದಿಕೊಂಡಿರುವ ಪ್ರದೇಶವಾಗಿದ್ದು ಅಭಿವೃದ್ಧಿಯಲ್ಲಿ ಹಿಂದುಳಿದಿದೆ. ಭೌಗೋಳಿಕವಾಗಿ ಚಿತ್ರದುರ್ಗ ಜಿಲ್ಲೆಗೆ ಸೇರಿಕೊಂಡಿದ್ದರೂ, ರಾಜಕೀಯವಾಗಿ ತುಮಕೂರು ಜಿಲ್ಲೆಗೆ ಸೇರುತ್ತದೆ. ಮಳೆಯ ಅಭಾವದಿಂದ ಇಲ್ಲಿ ಕುಡಿಯುವ ನೀರಿಗೆ ಬಹಳ ತೊಂದರೆ ಇದೆ. ಇಲ್ಲಿನ ಬಹು ಮುಖ್ಯ ಬೆಳೆ ನೆಲಗಡಲೆಯಾಗಿದ್ದು, ಮಳೆಯ ಮೇಲೆ ಅವಲಂಬಿತವಾಗಿದೆ. ಪಟ್ಟಣವು ಬೆಟ್ಟದ ತಪ್ಪಲಲ್ಲಿದ್ದು, ಸುತ್ತಲೂ ಬೆಟ್ಟ ಪ್ರದೇಶಗಳಿಂದ ಕೂಡಿದೆ. ಹಿಂದೆ ಈ ಪ್ರದೇಶವೆಲ್ಲಾ ಗೋಂಡಾರಣ್ಯಕ್ಕೆ ಸೇರಿತ್ತೆಂದು, ಪುರಾಣದಲ್ಲಿ ಉಲ್ಲೇಖನವಿದೆ. ಪಾವಗಡ ಈ ಹೆಸರು ಬರಲು ಇಲ್ಲಿನ ಬೆಟ್ಟವು ಹಾವಿನ ಆಕಾರದಲ್ಲಿ ಇರುವುದೇ ಕಾರಣವೆಂದು ತಿಳಿದು ಬರುತ್ತದೆ



**ಪಾವಗಡದ ಬಹುಮುಖ್ಯ ಮೂಲಭೂತ ಸಮಸ್ಯೆಗಳು**

ನೀರಿಗಾಗಿ ಪರಿಪಾಟಲು ಹೌದು ಈ ತಾಲೂಕಿನ ಉದ್ದಗಲಕ್ಕೂ ಸಿಗೋದು ಉಪ್ಪು ನೀರು. ಅದು ಫ್ಲೋರೈಡ್ ಮಿಶ್ರಿತ ನೀರು. ನೀರಿಗಾಗಿ ಪರಿತಪಿಸುವ ಇವರು ಇಲ್ಲಿ ಸಿಗುವ ಫ್ಲೋರೈಡ್ ನೀರನ್ನೇ ಕುಡಿದು ಬದುಕು ದೂಡುತ್ತಿದ್ದಾರೆ. ಹಾಗಾಗಿ ಇಲ್ಲಿನ ಬಹುಪಾಲು ಜನ ಫ್ಲೋರೈಡ್ ಪೀಡಿತರಾಗಿದ್ದಾರೆ. ಪಾವಗಡ ತಾಲೂಕಿನಲ್ಲಿ ಕಳೆದ ಎರಡು ದಶಕಗಳಿಂದ ಫ್ಲೋರೈಡ್‌ಯುಕ್ತ ನೀರು ಸೇವಿಸಿ ಹಲವರು ವಿವಿಧ ರೋಗಗಳಿಗೆ ತುತ್ತಾಗಿ ಸಾವನ್ನಪ್ಪಿದ್ದಾರೆ. ಇಲ್ಲಿ ಯಾವುದೇ ನದಿ ಮತ್ತು ಕಾಲುವೆಯ ಸಂಪರ್ಕವಿಲ್ಲ. ಹಾಗಾಗಿ ಭೂಮಿಯನ್ನು ಕೊರೆದು ಕೊರೆದು ಬೋರ್ ಹಾಕಿಸಿಕೊಳ್ಳಲಾಗುತ್ತಿದೆ. ಇದರಿಂದ

ಅಂತರ್ಜಲದ ಮಟ್ಟದಲ್ಲಿ ಕುಸಿತ ಕಂಡು ಬಂದು, ಅದು ಗಿಡಮರಗಳ ಉಳಿವಿಗೂ ಕುತ್ತಾಗಿದೆ. ಬಿರುಬಿಸಿಲಿಗೆ ಇದು ಹೆಸರಾಗಿದ್ದು, ರೈತರ ಬೆಳೆ ಮಳೆಯನ್ನೇ ಅವಲಂಬಿಸಿದೆ. ಕುಡಿಯುವ ನೀರಿಗಾಗಿ ಆಗ್ರಹಿಸಿ ಫೆಬ್ರುವರಿ 8, 2012ರಂದು ಪಾವಗಡದಿಂದ ಬೆಂಗಳೂರಿಗೆ ಪಾದಯಾತ್ರೆಯನ್ನು ಮಾಡಲಾಗಿತ್ತು. ಆದ್ರೆ ಪಾದಯಾತ್ರೆಗೆ ಸಿಕ್ಕಿದ್ದು ಬರಿ ಭರವಸೆ ಮಾತ್ರ.



**ಪಾವಗಡದ ದೊಡ್ಡ ಸೋಲಾರ್ ಪಾರ್ಕ್**

ಪಾವಗಡಕ್ಕೆ ಬಂತು ಏಷ್ಯಾದ ದೊಡ್ಡ ಸೋಲಾರ್ ಪಾರ್ಕ್. ಈ ಸೋಲಾರ್ ಪಾರ್ಕ್ ನಿರ್ಮಾಣಕ್ಕಾಗಿ ಈಗಾಗಲೇ 10 ಸಾವಿರ ಎಕರೆ ಪ್ರದೇಶವನ್ನು ಗುರುತಿಸಲಾಗಿದೆ. ಒಟ್ಟು 2 ಸಾವಿರ ಮೆಗಾವ್ಯಾಟ್ ಸೋಲಾರ್ ವಿದ್ಯುತ್ ಉತ್ಪಾದಿಸುವ ಗುರಿಯನ್ನು ಹೊಂದಲಾಗಿದೆ. ಏಷ್ಯಾದಲ್ಲೇ ಇದು ದೊಡ್ಡ ಸೌರ ವಿದ್ಯುತ್ ಪಾರ್ಕ್ ಆಗಲಿದೆ ಎಂದು ರವಿ ಕುಮಾರ್ ವಿವರಣೆ ನೀಡಿದರು. [ಸೌರ ವಿದ್ಯುತ್ ತಯಾರಿಸಿ, ಸರ್ಕಾರಕ್ಕೆ ಮಾರಿ]

ಮಧ್ಯಪ್ರದೇಶದಲ್ಲಿ 750 ಮೆ.ವ್ಯಾ, ಆಂಧ್ರಪ್ರದೇಶದಲ್ಲಿ 1 ಸಾವಿರ ಮೆ.ವ್ಯಾ. ಸೋಲಾರ್ ಪಾರ್ಕ್‌ಗಳಿವೆ. ಇವುಗಳನ್ನು ಹೊರತುಪಡಿಸಿದರೆ ಪಾವಗಡದ 2 ಸಾವಿರ ಮೆ.ವ್ಯಾ. ಸಾಮರ್ಥ್ಯದ ಪಾರ್ಕ್ ಏಷ್ಯಾಕ್ಕೇ ಪ್ರಥಮವಾಗಲಿದೆ ಎಂದು ತಿಳಿಸಿದರು.[ಕರ್ನಾಟಕದಲ್ಲಿ ಹರ್ಭಜನ್ 'ಸೌರಘಟಕ' ಸ್ಥಾಪನೆ]



ಸೌರ ವಿದ್ಯುತ್ ಉತ್ಪಾದನೆಯಲ್ಲಿ ಕರ್ನಾಟಕ ರಾಜ್ಯ ಪ್ರಸ್ತುತ 4ನೇ ಸ್ಥಾನದಲ್ಲಿದೆ. ರಾಜ್ಯದಲ್ಲಿ ಈಗಾಗಲೇ ನೂತನ ಸೋಲಾರ್ ನೀತಿ ಜಾರಿ ಮಾಡಲಾಗಿದ್ದು, 2 ಸಾವಿರ ಸೌರ ವಿದ್ಯುತ್ ಉತ್ಪಾದಿಸುವ ಗುರಿಯನ್ನು ಹೊಂದಲಾಗಿದೆ ಎಂದು ಅವರು ಹೇಳಿದರು.

## ಪಾವಗಡದ ವಿವರಣೆ

| | |
|---|---|
| ದೇಶ | ಭಾರತ |
| ರಾಜ್ಯ | ಕರ್ನಾಟಕ |
| ಜಿಲ್ಲೆ | ತುಮಕೂರು |
| **ಸರ್ಕಾರ** | |
| • ಮಾದರಿ | ಟೌನ್ ಮುನ್ಸಿಪಲ್ ಕೌನ್ಸಿಲ್ |
| • ದೇಹ | ಪಾವಗಡ ಪಟ್ಟಣ ಪುರಸಭೆ |
| ಎತ್ತರ | 846 ಮೀ (2,776 ಅಡಿ) |
| **ಜನಸಂಖ್ಯೆ (2011)** [1] | |
| • ಒಟ್ಟು | 28,486 |
| **ಭಾಷೆಗಳು** | |
| • ಅಧಿಕೃತ | ಕನ್ನಡ |
| ಸಮಯ ವಲಯ | UTC+5:30 ( IST ) |
| ಪಿನ್ | 561202 |
| ದೂರವಾಣಿ ಕೋಡ್ | 08136 |
| ವಾಹನ ನೋಂದಣಿ | ಕೆಎ-64 |

**ಪಾವಗಡ**
**ಪಾಮುಕೊಂಡ**

**ಪಟ್ಟಣ**

ಅಡ್ಡಹೆಸರು: ಪಾವಗಡ



ಭಾರತ, ಕರ್ನಾಟಕ, ತುಮಕೂರಿನಲ್ಲಿ ಸ್ಥಳ

## ಕೊನೆಯ ಮಾತು

ಪಾವಗಡ ಪಟ್ಟಣ ಚಿಕ್ಕದಾದರೂ ಚೊಕ್ಕವಾಗಿದೆ. ನಕ್ಸಲ್ ಪೀಡಿತ ಮತ್ತು ಬರಪೀಡಿತ ಪ್ರದೇಶ ಅನ್ನೋ ಹಣೆಪಟ್ಟಿ ಕಟ್ಟಿಕೊಂಡಿದ್ದರೂ, ಇಲ್ಲಿ ನಕ್ಸಲರ ಹಾವಳಿ ಅಷ್ಟಾಗಿ ಕಾಣಿಸುವುದಿಲ್ಲ. ಆದರೆ ಬರ ಪೀಡಿತ ಅನ್ನೋದಂತೂ ಸರ್ವ ಸತ್ಯ. ಈ ತಾಲೂಕಿನ ಜನತೆ ಈಗ ಬದಲಾಗುತ್ತಿದ್ದಾರೆ. ಮೊದಲು ಕೃಷಿಯನ್ನೆ ಬೆನ್ನೆಲುಬಾಗಿ ನಂಬಿಕೊಂಡಿದ್ದವರು. ಈಗ ಬಿಸಿನೆಸ್‌ಗೆ ಇಳಿದುಬಿಟ್ಟಿದ್ದಾರೆ. ಬೆಟ್ಟದ ಬುಡದಲ್ಲಿ ಹರಡಿ ಕೊಂಡಿರೋ ಈ ತಾಲೂಕಿಗೆ ಸಂಪರ್ಕ ಮಾಧ್ಯಮದ ಕೊರತೆಯೇನು ಇಲ್ಲ. ರಾಜಧಾನಿ ಬೆಂಗಳೂರಿನಿಂದ ಪ್ರತಿ ಕಾಲು ಗಂಟೆಗೊಂದು ಕೆಎಸ್‌ಆರ್‌ಟಿಸಿ ಬಸ್ ಸೌಲಭ್ಯವಿದೆ. ಮಳೆ ಬೆಳೆ ಇಲ್ಲವಾದ್ರೂ, ಜನರ ಮಾತಿನಲ್ಲಿನ ಗತ್ತು. ಆಂಧ್ರ-ಕನ್ನಡದ ಬೆರಗು ಇಲ್ಲಿ ಇದೆ. ಬಡ ಪೀಡಿತ ಪ್ರದೇಶವಾದ್ರೂ ಇಲ್ಲಿನ ಳಂ ರಷ್ಟು ವಿದ್ಯಾರ್ಥಿಗಳು ತುಮಕೂರು-ಬೆಂಗಳೂರು ನಗರಗಳಲ್ಲಿ ವ್ಯಾಸಂಗ ಮಾಡಿ ಉನ್ನತ ಹುದ್ದೆಗಳಲ್ಲಿದ್ದಾರೆ. ಹಾಗಾಗಿ ಪಾವಗಡ ಪ್ರತಿಭಾವಂತರ ತಾಣವಾಗಿದೆ. ಆದರೆ ದುರದೃಷ್ಟವೆಂದರೆ ಇದರ ಅಭಿವೃದ್ಧಿಗೆ ನೀರು ಮತ್ತು ರೈಲು ಸಂಪರ್ಕ ಬೇಕಾಗಿದೆ.